ತಾಲ್ಲೂಕು.	ಫಾರೆಸ್ಟ್.	ಅಂಜಿಕೆ.	ಲದ್ದೆಮಾಡತಕ್ಕ ಮೊತ್ತ.	ಸರಾಸರಿ ಫಾಸಲೆ.
ಹೆಗ್ಗಡದೇವನಕೋಟೆ.	ಬೇಗೂರು ..	(1) ಗುಂಡ್ರಿ ..	2,000	
		(2) ಬೈರಿಗದ್ದೆ ..	4,000	
		(3) ವನಕೆಗುಂಡಿಮಾಳ ..	2,000	
	ಐನೂರುಮಾರಿಗುಡಿ ..	(1) ಕಲ್ಲುಕೆರೆ ..	4,000	
		(2) ವಾರಂಚಿ ..	2,000	
		(3) ಹಿಂಡುಸ್ಕಾಲ್ ಕಟ್ಟೆ ..	2,000	
	ಕಾಕನಕೋಟೆ ..	(1) ಆನೆಮಾಳ ..	2,000	
		(2) ತ್ಯಾಗದಮರದ ತಿಟ್ಟು ..	2,000	
		ಜುಮ್ಲಾ ..	20,000	

2. ತಮೊಂ ದರಖಾಸ್ತುಗಳೂ "ಮೈಸೂರ್ ಡಿಸ್ಟ್ರಿಕ್ಟಿನಲ್ಲಿ ಫಾರೆಸ್ಟುಗಳಿಂದ ಅಂಜಿಕೆಗಳಿಗೆ ಸಾಗಿಸುವದಕ್ಕೆ ಮಾತ್ರವೇ, ದರಖಾಸ್ತು" ಯಂಬುವದಾಗಿ ಮೇಲ್‌ವಿಳಾಸ ಬರದು ಮೊಹರುಮಾಡಿ ರಿಜಿಸ್ಟರ್ ಮೂಲಕ ರವಾನಿಸಬೇಕು. ದರಖಾಸ್ತು ಜೊತೆಯಲ್ಲಿ ದರಖಾಸ್ತು ಮಾಡಲ್ಪಡುವ ಪ್ರತಿ ಬಂದು ಫಾರೆಸ್ಟಿಗೂ 50 ರೂಪಾಯಿ ಬೆಲೆಯುಳ್ಳ ಕರೆನ್ಸೀನೋಟುಗಳಿ, ಯಾ ಪ್ರೊನೋಟುಗಳಿ ರವಾನಿಸಬೇಕು. ದರಖಾಸ್ತುಗಳು ಅಜಮಾಯಿಷಿಯಿಂದ ಮೇಲ್ಕಂಡ ಕರೆನ್ಸೀನೋಟುಗಳನ್ನ ಮಾಪಸು ಮಾಡಲ್ಪಡುವವು.

3. ದರಖಾಸ್ತುಗಳು ಮೈಸೂರು ಡಿಸ್ಟ್ರಿಕ್ಟು ಫಾರೆಸ್ಟು ಆಫಿಸರವರಿಂದ 1896ನೇ ಇಸವಿ ಆಕ್ಟೋಬರು 31ನೇ ತಾರೀಖು ವರೆಗೆ ಅಂಗೀಕರಿಸಲ್ಪಡುವವು.

4. ದರಖಾಸ್ತು ಮಾಡಲು ಇಚ್ಛೈವುಳ್ಳ ಕಂಟ್ರಾಕ್ಟುದಾರನು ಮೇಲ್ಕಂಡ ಫಾರೆಸ್ಟುಗಳ ಪೈಕಿ ಯೊಂದಕ್ಕಿಂತಲೂ ಜಾಸ್ತೀ ಫಾರೆಸ್ಟುಗಳಿಂದ, ತಯಾರಾದ್ದನ್ನ ಸಾಗಿಸುವದಕ್ಕೆ ಮಾತ್ರ, ದರಖಾಸ್ತು ಮಾಡಿದ ಪಕ್ಷದಲ್ಲಿ ನಾಟುವನ್ನು ಪ್ರತಿ ಯೊಂದು ಫಾರೆಸ್ಟಿನಿಂದಲೂ ಅಂಜಿಕೆಗಳಿಗೆ ಸಾಗಿಸುವದಕ್ಕೆ ಮಾತ್ರ, ಯೊಪ್ಪಿಕೊಳ್ಳುವ, ಕಮ್ಮಿ ದರವನ್ನು ಬೇರೆ ಬೇರೆಯಾಗಿ ನಮೂದಿಸತಕ್ಕದ್ದು. ಸಲೆ ಆಡಿ 1ಕ್ಕೆ ಇಷ್ಟು ದರವೆಂತ ನಮೂದಿಸಬೇಕು.

5. ಸ್ಯ 1897ನೇ ಇಸವಿ ಜನವರಿ 17ರ ಯೊಳಗಾಗಿ ಮೇಲೆ ನಮೂದಿಸಿರುವ ಪೂರಾ ಮೊತ್ತವನ್ನು ಆಯಾಯ ಅಂಜಿಕೆಗಳಿಗೆ ಸಾಗಿಸಬೇಕು.

6. ಅಂಗೀಕರಿಸಲ್ಪಟ್ಟ ದರಖಾಸ್ತುದಾರನು ತನ್ನ ದರಖಾಸ್ತು ಮಂಜೂರ್ಮಾಡಲ್ಪಟ್ಟ ತರುವಾಯ ತಾನು ಬರದುಕೊಡುವ ಕರಾರು ಮೇರಿಗೆ ಕ್ರಮವಾಗಿ ನಡದುಕೊಳ್ಳುವ ಬಗ್ಗೆ ಜಾಮೀನು ತರೀಕ ಫಾರೆಸ್ಟು 1ಕ್ಕೆ 100 ರೂಪಾಯಿ ಪ್ರಕಾರ ಡಿಪಾಜಿಟ್ಟು ಕಟ್ಟತಕ್ಕದ್ದು. ಮೇಲ್ಕಂಡ ಷರತ್ತು ಮೇರೆ ನಡಿಯಲು ತಪ್ಪಿದಲ್ಲಿ ಠೇವಣೀ ಮೊಬಲಗನ್ನ ಸರ್ಕಾರಕ್ಕೆ ಕೇರಿಸಿಕೊಳ್ಳಲ್ಪಡುವದು.

7. ಬ್ಯಾಸಿಗೆ ಕಾಲದಲ್ಲಿ ಡಿಸ್ಟ್ರಿಕ್ಟು ಫಾರೆಸ್ಟು ಆಫಿಸರವರಿಂದ ಮಾಡಲ್ಪಡುವ ಕಾಯಿದೆ ಕಾನೂಗಳಂತೆ ನಡಿಯಲು ಕಂಟ್ರಾಕ್ಟುದಾರನು ಬದ್ಧನಾಗಿರುವನು.

8. ಡಿಸ್ಟ್ರಿಕ್ಟು ಫಾರೆಸ್ಟು ಆಫಿಸರವರು ಕಮ್ಮಿದರದ ಅಥವಾ ಇತರ ಯಾವ ದರಖಾಸ್ತುಗಳನ್ನು ಅಂಗೀಕರಿಸುವದಕ್ಕೆ ಬದ್ಧರಾಗಿರುವದಿಲ್ಲ. ಮತ್ತು ಅಂಥಾ ಅಂಗೀಕಾರವು ಫಾರೆಸ್ಟು ಕ್ವಾಸರ್ವೇಟರ್ ಸಾಹೆಬರವರ ಮಂಜೂರಾತಿಗೆ ಬಳಪಟ್ಟು ಇರುತ್ತೆ.

9. ಸಾಮಾನುಗಳು ಸಾಗಿಸುವದಕ್ಕೆ ಗಾಡಿ, ರಸ್ತೆ ವಗೈರೇ ದಾರಿಗಳನ್ನು ಮಾಡಿಕೊಡಲು ಸರ್ಕಾರದವರು ಬದ್ಧರಾಗಿಲ್ಲವಾದ ಸಬಬು ವುದ್ದೇಸಿಸುವ ಕಂಟ್ರಾಕ್ಟುದಾರನೇ ಆತನ ಹಾತ್‌ಲಾಗವಡಿನಿಂದ ತಕ್ಕ ಯೇರ್ಪಾಡುಗಳು ಮಾಡಿಕೊಳ್ಳತಕ್ಕದ್ದು. ಮರಗಳನ್ನು ಸಾಗಿಸದೆ, ಇರುವದಪಕ್ಷ ಯಾವ ಸಬಬುಗಳನ್ನೂ ಅಂಗೀಕರಿಸಲಾರೆವು.

10. ವುದ್ದೇಸಿಸುವ ಕಂಟ್ರಾಕ್ಟುದಾರರು ಅಪೇಕ್ಷಿಸುವ ಇತರ ಜಾಸ್ತೀ ಸಂಗತಿಗಳನ್ನು ಮೈಸೂರ್ ಡಿಸ್ಟ್ರಿಕ್ಟು ಫಾರೆಸ್ಟು ಆಫಿಸಿನಲ್ಲಿ ವಿಚಾರಿಸಿ ತೆಗದುಕೊಳ್ಳಬಹುದು.

ಎಂ. ಜಿ. ರಾಮರಾವ್,
ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರ್.

ನಗರದ ಡಿವಿಜ್ಞ ಡಿಸ್ಟ್ರಿಕ್ಟು ಜಡ್ಜಿಯವರ ಕೋರ್ಟಿನಲ್ಲಿ.

ಸ್ಯ 1896-97ನೇ ಇಸವಿ ಅರ್ಜಿ ನಂಬರ್ 82.

ಮೃತಪಟ್ಟ ಚಿತ್ರದುರ್ಗದ ವಾಸಸ್ಥ ತಿಮ್ಮಪ್ಪಶಾಸ್ತ್ರಿ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು ಚಿತ್ರದುರ್ಗದಲ್ಲಿರುವ ಕೃಷ್ಣಶಾಸ್ತ್ರಿ ಬಿನ್ ತಿಮ್ಮಣ್ಣಶಾಸ್ತ್ರಿಯು. ಮೃತಪಟ್ಟ ಸದರೀ ತಿಮ್ಮಪ್ಪಶಾಸ್ತ್ರಿಯು ತನಗೆ ಮಗನು ಆಗಬೇಕೆಂಬ ಹಕ್ಕುದಾರಿ ಮೇಲೆ ಚಿತ್ರದುರ್ಗ ಸ್ಥಳದ ಕೃಷ್ಣಶಾಸ್ತ್ರಿ ಬಿನ್ ತಿಮ್ಮಣ್ಣಶಾಸ್ತ್ರಿಯು, ಚಿತ್ರದುರ್ಗದ ವಾಸಸ್ಥನಾಗಿ ಮೃತಪಟ್ಟ ತಿಮ್ಮಪ್ಪಶಾಸ್ತ್ರಿಯ ಜಿಂದಗಿ ಖರ್ಚಾಗಿ ಬರತಕ್ಕ 110 ರೂಪಾಯಿ ನಗದು 80 ರೂಪಾಯಿ ದಾವಾಕೆ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಯ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಗೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

485

ಸದರೀ ದರಖಾಸ್ತುದಾರನಾದ ಕೃಷ್ಣಶಾಸ್ತ್ರಿಯು ಅರ್ಜಿಯನ್ನು 1896ನೇ ಇಸವಿ ನವಂಬರ್ ತಿಂಗಳ ತಾರೀಖು 20ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ತಿಮ್ಮಪ್ಪಶಾಸ್ತ್ರಿಯ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

ಸ್ಯ 1896—97ನೇ ಇಸವಿ ಅರ್ಜೀ ನಂಬರ್ 89.

ಮೃತಪಟ್ಟ ಶೃಂಗೇರಿ ಮೇಲ್‌ಪಾಲ್ ಸುಂಕುರಡಿ ವಾಸಸ್ಥರಾದ ಹಳೆ ಮನೆ ರಾಮಪ್ಪನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು) ಗಿರಿಯಮ್ಮ ಯಾನೆ ಸಾವಿತ್ರಮ್ಮ, ಮೃತಪಟ್ಟ ಸದರೀ ರಾಮಪ್ಪನವರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿಮೇಲೆ ಶೃಂಗೇರಿ ಮೇಲ್‌ಪಾಲ್ ಸುಂಕುರಡಿ ಸ್ಥಳದ ಗಿರಿಯಮ್ಮ ಯಾನೆ ಸಾವಿತ್ರಮ್ಮನವರು, ಸದರೀ ಸುಂಕುರಡಿ ವಾಸಸ್ಥರಾಗಿ ಮೃತಪಟ್ಟ ರಾಮಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ 2000 ರೂಸಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಯ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಗಿರಿಯಮ್ಮ ಯಾನೆ ಸಾವಿತ್ರಮ್ಮನವರ ಅರ್ಜಿಯನ್ನು 1896ನೇ ಇಸವಿ ನವಂಬರ್ ತಿಂಗಳ ತಾರೀಖು 20ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರಾಮಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1896ನೇ ಇಸವಿ ಸೆಪ್ಟಂಬ ತಿಂಗಳು 30ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಿಶಿ ನಮ್ಮದಸ್ತಖತ್ತೊಡನೆ ಕೊಡೋಣಾಗಿಧೆ.

ಬಿ. ತಿರುಮಲಾಚಾರ್,
ಡಿಸ್ಟ್ರಿಕ್ಟು ಜಡ್ಜ್.

ತಾರೀಖು 26ನೇ ಆಗಸ್ಟ್ 1896.

ಗೆಜೆಟ್ ಚಂದಾದಾರರು ಚಂದಾ ಹಣವನ್ನು ಪೋಸ್ಟ್‌ಆಫಿಸ್ ಮನಿಆರ್ಡರ್ ಮೂಲಕ ಕಳುಹಿಸುತ್ತಾ ಅವರ ಹೆಸರು ಸರಿಯಾದ ವಿಳಾಸ ಬರೆಂತಾದ ತಪ್ಪಲ್ ತಿಳಿಸದೇಲೂ ಮತ್ತು ರಿಕಾರ್ಡಿನಲ್ಲಿ ಯಿಡುವದಕ್ಕೆ ವಿಶೇಷ ಅನನುಕೂಲವಾಗಿರುಂಥಾ ಕೂರ್ಪಗಳಿಗೆ ಮೇಲೆ ಅಸ್ಪಷ್ಟವಾಗಿ ಬರಿಯುವದರಿಂದಲೂ ವಿಶೇಷ ಗಲಾಟೆಗೆ ಆಸ್ಪದವಾಗಿರುವದರಿಂದ ಸರ್ವರಿಗೂ ತಿಳಿಸುವದೇನಂದರೆ,—ಯಲ್ಲಾ ತಾಲ್ಲೂಕು ಖಜಾನೆಗಳಲ್ಲಿಯೂ ಗೆಜೆಟ್ ಚಂದಾ ಮೊಬಲಗು ತೆಗದುಕೊಂಡು ರೀತಿ ಕೊಡುವ ಬಗ್ಯಾಗಿ ಆಪ್ಪಣೆ ಯಿರುವದ್ದರಿಂದ ಇನ್ನು ಮೇಲೆ ಮೈಸೂರ್ ಶೀಮೆ ಅಲ್ಲದ ಇತರ ಸ್ಥಳಗಳಿಂದ ಬರುವ ಮನಿಆರ್ಡರ್ ಹೊರ್ತಾಗಿ ಅನ್ಯಥಾ ಆ ಬಗ್ಯಾಗಿ ಈ ಆಫಿಸಿಗೆ ಕಳುಹಿಸಲ್ಪಡುವ ಯಾವ ಮನಿಆರ್ಡರುಗಲಿ ಈ ಆಫಿಸಿನಲ್ಲಿ ಅಂಗೀಕರಿಸಲ್ಪಡಲಾರದು ಮತ್ತು ಪೋಸ್ಟ್ ಕಾರ್ಡ್ ಮೂಲಕ ಅಥವಾ ನೋಟ್ ಪೇಪರಿಗಿಂತಲೂ ಕಮ್ಮಿಯಾದ ಕಾಗದ್ದಲ್ಲಿ ಬರಿಯಲ್ಪಡುವ ಯಾವ ಅಂಶಕ್ಕೂ ನಿಗೆ ಕೊಡಲ್ಪಡಲಾರದು.

ಮೈಸೂರ ಗೆಜೆಟ್ ಚಂದಾ ದರ ವಗ್ಯೆರೆ.

ತಾರೀಖು 26ನೇ ಜನವರಿ 1889.

ಮೈಸೂರ ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ, ಮತ್ತು ಸದರೀ ಗೆಜೆಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ಮುಂತಾದವುಗಳೂ ಬೆಂಗಳೂರಲ್ಲಿರುವ ಮೈಸೂರ ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರೆಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ.	ಟಪ್ಪಾಲ್ ಹಾಸಲು ಮೈಸೂರು ಶೀಮೆ ಶಿವಾಯಿ ಇತರ ಸ್ಥಳಗಳಿಗೆ.
	ರೂ. ಆ.	ರೂ. ಆ.
ಇಂಗ್ಲೀಷು ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3 8	1 12
ಇಂಗ್ಲೀಷು ಮತ್ತು ಕನ್ನಡ ಸುದಾ 12 ತಿಂಗಳಿಗೆ	7 0	3 8
ಚೆಪ್ ಮೊಹೇ ಯಾ ಕ್ವಾರ್ಟರಿಗೆ		ದಾಮಾಷಾಯಿ ಪ್ರಕಾರ ದರಗಳು
ಚಾಲ್ತಿ ವರುಷದ ಗೆಜೆಟ್ ಕಾಪಿ 1ಕ್ಕೆ ರೆಗ್ಯುಲೇರ್ಷ ಯಾ ಆಕ್ಟುಗಳು ಯಾವದೂ ಇಲ್ಲದಿದ್ದರೆ.		0 8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜ್ ಕೇಳಿ ತಿಳಿದುಕೊಳ್ಳಬಹುದು.

1891ನೇ ಇಸವಿ ಜುಲೈ 2ನೇ ಮುಕ್ತಂ 155ನೇ ನಂಬರ್ ಉಳ್ಳ ಗವರ್ನಮೆಂಟ್ ಇಸ್ತಿಹಾರ್‌ನಾಮೆ ಅನುಸರಿಸಿ ಕನ್ನಡ ಗೆಜೆಟ್ ಮೈಸೂರು ಶೀಮೆಯಲ್ಲಿನ ಪಟೇಲ್ ಶಾನುಭೋಗರುಗಳಿಗೆ ಅರ್ಧ ದರಕ್ಕೆ ಕೊಡಲ್ಪಡುವದು; ಆದರೆ ಅಂಥಾ ಪಟೇಲ್, ಶಾನುಭೋಗರುಗಳು ಆ ಕಾಲದಲ್ಲಿ ವಾಸ್ತವ್ಯವಾಗಿ ಪಟೇಲಿ ಯಾ ಶಾನುಭಾವಿಕೆ ಕೆಲಸ ನೋಡುತಲಿಧಾರೆಂಬದಾಗಿ ಆಯಾ ತಾಲ್ಲೂಕು ಅಮಲ್‌ದಾರರಿಂದ ಪಂದು ಸರಟಿಫಿಕೇಟನ್ನು ಪಡೆದು ಹಾಜರ್ಮಾಡಬೇಕಾಗಿರುತ್ತೆ.